ಕರ್ನಾಟಕ ಸರ್ಕಾರ

ಜಿಲ್ಲಾಧಿಕಾರಿಗಳ ಕಾರ್ಯಾಲಯ, ಗುಲಬರ್ಗಾ

ಸಂಖ್ಯೆ:ಕಂ/ಸಿಬ್ಬಂದಿ-1/ಗ್ರಾಲೇನೇಮಕಾತಿ/93/2010-11 ದಿನಾಂಕ: 13-09-2011

: ಪ್ರಕಟಣೆ :

ವಿಷಯ: ಗುಲಬರ್ಗಾ ಜಿಲ್ಲೆಯ ಕಂದಾಯ ಇಲಾಖೆಯಲ್ಲಿ ಖಾಲಿ ಇರುವ ಗ್ರಾಮಲೆಕ್ಕಾಧಿಕಾರಿ ಹುದ್ದೆಗಳನ್ನು ಭರ್ತಿ ಮಾಡುವ ಕುರಿತಂತೆ ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟಿಸುವ ಬಗ್ಗೆ.

ಉಲ್ಲೇಖ: 1. ಈ ಕಾರ್ಯಾಲಯದ ಅಧಿಸೂಚನೆ ಸಮ ಸಂಖ್ಯೆ ದಿನಾಂಕ: 05-04-2011
2. ಈ ಕಾರ್ಯಾಲಯದ ಪ್ರಕಟಣೆ ದಿನಾಂಕ: 12-07-2011

*~*~*

ಗುಲಬರ್ಗಾ ಜಿಲ್ಲೆಯ ಕಂದಾಯ ಇಲಾಖೆಯಲ್ಲಿ ಖಾಲಿ ಇರುವ ಗ್ರಾಮಲೆಕ್ಕಾಧಿಕಾರಿಗಳ ಹುದ್ದೆಗಳನ್ನು ಭರ್ತಿ ಮಾಡುವ ಕುರಿತಂತೆ ಈಗಾಗಲೇ ದಿನಾಂಕ:06-08-2011 ರಂದು ಅಭ್ಯರ್ಥಿಗಳ ಮೂಲ ದಾಖಲಾತಿಗಳ ಪರಿಶೀಲನಾ ಕಾರ್ಯವನ್ನು 1:5 ಅನುಪಾತದಲ್ಲಿ ಕೈಗೊಳ್ಳಲಾಗಿದೆ. ಆದ್ದರಿಂದ ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆ ಪಟ್ಟಿ ಹಾಗೂ 100% ಕಾಯ್ದಿರಿಸಿದ ಪಟ್ಟಿಯನ್ನು ಈ ಮೂಲಕ ಪ್ರಕಟಿಸಲಾಗಿದೆ.

ಸದರಿ ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿ ಕೆಲವೊಂದು ಮೂಲ ದಾಖಲಾತಿಗಳನ್ನು ಪರಿಶೀಲಿಸದೇ ಇರುವ ಅಂಗವಿಕಲ ಹಾಗೂ ಮಾಜಿ ಸೈನಿಕ ಅಭ್ಯರ್ಥಿಗಳ ಹೆಸರು ಉದ್ಭವಿಸಿರುತ್ತದೆ. ಹಾಗೂ ಇನ್ನುಳಿದ ಎಲ್ಲಾ ಅಂಗವಿಕಲ ಹಾಗೂ ಮಾಜಿ ಸೈನಿಕ ಅಭ್ಯರ್ಥಿಗಳ ಪಟ್ಟಿಯನ್ನು ಪ್ರಕಟಿಸಿದೆ. **ಕೇವಲ ಅಂತಹ ಅಭ್ಯರ್ಥಿಗಳ ಮೂಲ ದಾಖಲಾತಿಗಳನ್ನು ಪರಿಶೀಲಿಸುವ ಕಾರ್ಯವನ್ನು ದಿನಾಂಕ: 22-09-2011 ರಂದು ಬೆಳಿಗ್ಗೆ 11-00 ಗಂಟೆಗೆ ಜಿಲ್ಲಾಧಿಕಾರಿಗಳ ಕಾರ್ಯಾಲಯ, ಗುಲಬರ್ಗಾದಲ್ಲಿ ನಿಗದಿಪಡಿಸಲಾಗಿದೆ.** ಈ ಸಂಬಂಧ ಪರಿಶೀಲನೆ ಆಗದೇ ಇರುವ ಅಂಗವಿಕಲ ಹಾಗೂ ಮಾಜಿ ಸೈನಿಕ ಅಭ್ಯರ್ಥಿಗಳ ಮೂಲ ದಾಖಲಾತಿಗಳ ಪರಿಶೀಲನಾ ಕಾರ್ಯಕ್ಕೆ ತಪ್ಪದೇ ಹಾಜರಿರಲು ತಿಳಿಸಲಾಗಿದೆ. ಒಂದು ವೇಳೆ ಅಭ್ಯರ್ಥಿಗಳು ಗೈರುಹಾಜರಾಗಿದ್ದಲ್ಲಿ ಅವರುಗಳ ಹೆಸರುಗಳನ್ನು ನೇಮಕಾತಿ ಪ್ರಕ್ರಿಯೇಯಿಂದ ರದ್ದುಗೊಳಸಲಾಗುವುದೆಂದು ಈ ಪ್ರಕಟಣೆ ಮೂಲಕ ತಿಳಿಸಲಾಗಿದೆ.

13/09/11

ಜಿಲ್ಲಾಧಿಕಾರಿಗಳು ಗುಲಬರ್ಗಾ

ಪ್ರತಿಯನ್ನು:

1. ಜಿಲ್ಲಾ ವಾರ್ತಾ ಮತ್ತು ಪ್ರಚುರ ಅಧಿಕಾರಿಗಳು, ಗುಲಬರ್ಗಾ ಇವರಿಗೆ ನೀಡುತ್ತಾ ಮೇಲಿನ ವಿಷಯವನ್ನು ಪ್ರಮುಖ ದಿನಪತ್ರಿಕೆಗಳಲ್ಲಿ ರಾಜ್ಯಾದ್ಯಂತ ಸರ್ಕಾರಕ್ಕೆ ಯಾವುದೇ ಹೊರೆ ಬೀಳದಂತೆ ಪ್ರಕಟಿಸುವಂತೆ ಕೋರಿದೆ.
2. ಡಿಐಓ ಎನ್‌ಐಸಿ, ಗುಲಬರ್ಗಾ ಇವರಿಗೆ ನೀಡುತ್ತಾ ಸದರಿ ತಾತ್ಕಾಲಿಕ ಆಯ್ಕೆ ಪಟ್ಟಿ ಹಾಗೂ ಪ್ರಕಟಣೆಯನ್ನು ಜಿಲ್ಲಾ ವೆಬಸೈಟ್‌ನಲ್ಲಿ ಪ್ರಕಟಿಸಲು ಕೋರಿದೆ.